ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/45/ಪ್ರವೇಶಾತಿ ಮಾರ್ಗಸೂಚಿ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು – 560 001,
ದಿನಾಂಕ:14.07.2020.

# ಸುತ್ತೋಲೆ

**ವಿಷಯ**: 2020-21ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಪ್ರವೇಶಾತಿ ಸಮಯದಲ್ಲಿ ಅನುಸರಿಸಬೇಕಾದ ಮಾರ್ಗಸೂಚಿಗಳು.

********

ರಾಜ್ಯದಲ್ಲಿ ಪದವಿ ಶಿಕ್ಷಣಕ್ಕೆ ಹೆಚ್ಚಿನ ಉತ್ತೇಜನವನ್ನು ನೀಡಿ ಶೇಕಡಾವಾರು G.E.R. (Gross Enrolment Ratio) ಪದವಿ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಗೆ ಒಳಪಡುವ ರಾಜ್ಯದ ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2020-21ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಥಮ ಪದವಿ ತರಗತಿಗೆ ಪ್ರವೇಶಾತಿ ಪ್ರಕ್ರಿಯೆ ಪ್ರಾರಂಭಿಸುವ ಕುರಿತು ಅನುಸರಿಸಬೇಕಾದ ಏಕರೂಪದ ಮಾರ್ಗಸೂಚಿಗಳ ಅಂಶಗಳನ್ನು ಕೆಳಕಂಡಂತೆ ಜಾರಿಗೊಳಿಸಲಾಗಿದ್ದು, ಅದರಂತೆ ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

1. ದ್ವಿತೀಯ ಪಿಯುಸಿ ಪರೀಕ್ಷಾ ಫಲಿತಾಂಶ ಪ್ರಕಟವಾದ ಕೂಡಲೇ ಪ್ರವೇಶಾತಿ ಬಯಸಿ ಬರುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಅರ್ಜಿಯನ್ನು ನೀಡುವುದು.

2. ಸರ್ಕಾರದ ಆದೇಶ ಸಂಖ್ಯೆ: ಇಡಿ 102 ಯುಎನ್ಇ 2009 ಬೆಂಗಳೂರು ದಿನಾಂಕ:04.06.2009 ರನ್ವಯ ಪ್ರವೇಶಾತಿ ಕೋರಿ ಬರುವ ಯಾವುದೇ ವಿದ್ಯಾರ್ಥಿಗೆ ಪ್ರವೇಶಾತಿಯನ್ನು ನಿರಾಕರಿಸದೇ ಎಲ್ಲರಿಗೂ ಪ್ರವೇಶಾತಿಯನ್ನು ನೀಡುವುದು.

3. ಕಾಲೇಜುಗಳಲ್ಲಿ ಲಭ್ಯವಿರುವ ಕೋರ್ಸ್ / ಕಾಂಬಿನೇಷನ್‌ಗಳ ವಿವರ, ಶುಲ್ಕಗಳ ವಿವರ ಮತ್ತು ವಿದ್ಯಾರ್ಥಿಗಳಿಗೆ ದೊರೆಯುವ ಸೌಲಭ್ಯಗಳ ಬಗ್ಗೆ ಮಾಹಿತಿಯನ್ನು ಕಾಲೇಜಿನ ಅಂತರ್ಜಾಲ ತಾಣದಲ್ಲಿ (Website) ಹಾಗೂ ಸೂಚನಾ ಫಲಕದಲ್ಲಿ (Notice board) ಕಡ್ಡಾಯವಾಗಿ ಪ್ರಕಟಿಸುವುದು.

ಉದಾ: ವಿದ್ಯಾರ್ಥಿಗಳಿಗೆ ದೊರೆಯುವ ವಿವಿಧ ವಿದ್ಯಾರ್ಥಿ ವೇತನಗಳು, ಶುಲ್ಕ ವಿನಾಯಿತಿ ಸೌಲಭ್ಯಗಳು, ವಿಶೇಷವಾಗಿ ಹೆಣ್ಣು ಮಕ್ಕಳಿಗೆ ಇರುವ ಶುಲ್ಕ ವಿನಾಯಿತಿ ಸೌಲಭ್ಯಗಳು, ಪದವಿ ನಂತರದ ಉದ್ಯೋಗಾವಕಾಶಗಳ ಕುರಿತು ಮಾಹಿತಿ ನೀಡುತ್ತಿರುವ ಬಗ್ಗೆ, ಉದ್ಯೋಗ ಮೇಳಗಳ ಆಯೋಜನೆ, ಕೌಶಲ್ಯ ತರಬೇತಿ, ಗ್ರಂಥಾಲಯ ಸೌಲಭ್ಯ, ಪ್ರಯೋಗಾಲಯ ಸೌಲಭ್ಯ, ಸ್ಮಾಟ್ ಕ್ಲಾಸ್, ಎನ್.ಸಿ.ಸಿ./ ಎನ್.ಎಸ್.ಎಸ್, ಕ್ರೀಡಾ ಸಾಂಸ್ಕೃತಿಕ, ರೆಡ್‌ಕ್ರಾಸ್ ಮತ್ತು ಭಾರತೀಯ ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳು ಇತ್ಯಾದಿ.

4. ಕಳೆದ ಶೈಕ್ಷಣಿಕ ಸಾಲುಗಳಲ್ಲಿ 200 ಕ್ಕಿಂತ ಕಡಿಮೆ ಪ್ರವೇಶಾತಿಯಾದ ಕಾಲೇಜುಗಳ ಪ್ರಾಂಶುಪಾಲರು ಪ್ರಸ್ತುತ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶಾತಿ ಹೆಚ್ಚಳಕ್ಕೆ ಅಗತ್ಯವಿರುವ ಎಲ್ಲಾ ರೀತಿಯ ಕ್ರಮಗಳನ್ನು ಕಡ್ಡಾಯವಾಗಿ ಅನುಸರಿಸುವುದು. ಅಲ್ಲದೆ ಕಾಲೇಜಿನ ಎಲ್ಲಾ ಬೋಧಕ / ಬೋಧಕೇತರ ಸಿಬ್ಬಂದಿಗಳು ಪ್ರವೇಶಾತಿ ಹೆಚ್ಚಿಸುವ ನಿಟ್ಟಿನಲ್ಲಿ ಸಕ್ರಿಯವಾಗಿ ಪಾಲ್ಗೊಂಡು ವಿದ್ಯಾರ್ಥಿಗಳು ಪ್ರವೇಶ ಪಡೆಯಲು ಪ್ರೇರೇಪಿಸುವುದು.

5. ಕಳೆದ ಶೈಕ್ಷಣಿಕ ವರ್ಷದಲ್ಲಿ ಸಾಕಷ್ಟು ವಿದ್ಯಾರ್ಥಿಗಳು ಪ್ರವೇಶ ಪಡೆಯದೇ ಸ್ಥಗಿತವಾಗಿರುವ ಕೋರ್ಸುಗಳನ್ನು ಪುನಶ್ಚೇತನಗೊಳಿಸುವ ಬಗ್ಗೆ ಅಗತ್ಯ ಕ್ರಮಕೈಗೊಳ್ಳುವುದು.

6. ಪ್ರಾಂಶುಪಾಲರು ಹಾಗೂ ಅಧ್ಯಾಪಕರು ವೈಯಕ್ತಿಕ ಗಮನಹರಿಸಿ ಪ್ರವೇಶಾತಿ ಹೆಚ್ಚಳಕ್ಕಾಗಿ ನೆರೆಹೊರೆಯ ಪಿಯು ಕಾಲೇಜುಗಳನ್ನು ಸಂಪರ್ಕಿಸಿ ಸಂಬಂಧಿಸಿದ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ದೊರೆಯುವ ಕೋರ್ಸು / ಕಾಂಬಿನೇಷನ್ ಮತ್ತು ಸೌಲಭ್ಯಗಳ ಬಗ್ಗೆ ವ್ಯಾಪಕ ಪ್ರಚಾರ ನೀಡುವುದರೊಂದಿಗೆ ಪ್ರವೇಶಾತಿ ಹೆಚ್ಚಳಕ್ಕೆ ಕ್ರಮಕೈಗೊಳ್ಳುವುದು.

7. ಮ್ಯಾನ್ಯುಯಲ್ ಪದ್ಧತಿಯಲ್ಲಿ ಸ್ವೀಕೃತ ಅರ್ಜಿಗಳನ್ನು ಆಯಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರವೇಶಾತಿ ಸಮಿತಿಯು ಸರ್ಕಾರದ ಚಾಲ್ತಿಯಲ್ಲಿರುವ ನಿಯಮಾನುಸಾರ ಅಗತ್ಯ ದಾಖಲಾತಿಯನ್ನು ಪಡೆದು, ಪರಿಶೀಲಿಸಿ ಪ್ರವೇಶಾತಿ ನೀಡತಕ್ಕದ್ದು.

8. ಕಾಲೇಜುಗಳಲ್ಲಿ ವಿವಿಧ ಕೋರ್ಸು / ಕಾಂಬಿನೇಷನ್‌ಗಳಿಗೆ ಪ್ರವೇಶಾತಿ ಪಡೆದ ಪ್ರಥಮ, ದ್ವಿತೀಯ ಮತ್ತು ತೃತೀಯ ವರ್ಷದ ವಿದ್ಯಾರ್ಥಿಗಳ ಮಾಹಿತಿಯನ್ನು ಕಡ್ಡಾಯವಾಗಿ e-MIS ನಲ್ಲಿ ಅಪ್‌ಲೋಡ್ ಮಾಡುವುದು.

9. ಈ ಕಛೇರಿ ಸುತ್ತೋಲೆ ಸಂಖ್ಯೆ: ಕಾಶಿಇ/20/ರ.ಪು/ಉಗ್ರಾಣ/2015-16 ದಿ:19.07.2018 ರನ್ವಯ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಂದ ಶುಲ್ಕ ವಸೂಲಾತಿಯನ್ನು ನಗದು ವ್ಯವಹಾರದ ಮೂಲಕ ಸ್ವೀಕರಿಸದೆ ಕಡ್ಡಾಯವಾಗಿ ಚಲನ್ ಮೂಲಕ ಬ್ಯಾಂಕ್‌ಗೆ ನೇರವಾಗಿ ಜಮಾ ಮಾಡುವುದು.

10. ವಿದ್ಯಾರ್ಥಿಗಳಿಂದ ಸಂಗ್ರಹಿಸಲಾದ ಶುಲ್ಕಗಳಲ್ಲಿ ಸರ್ಕಾರಿ ಶುಲ್ಕದ ಮೊತ್ತವನ್ನು ನಿಯಮಾನುಸಾರ ಖಜಾನೆ-2 ಮುಖಾಂತರ ಸರ್ಕಾರದ ಲೆಕ್ಕಶೀರ್ಷಿಕೆಗೆ ಜಮಾ ಮಾಡುವುದು.

11. ಸರ್ಕಾರದ ಆದೇಶ ಸಂಖ್ಯೆ: ಇಡಿ 102 ಯುಎನ್ಇ 2009 ಬೆಂಗಳೂರು ದಿನಾಂಕ:04.06.2009 ರನ್ವಯ ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಾಲಿ ಲಭ್ಯವಿರುವ ಬಿ.ಎ., ಬಿ.ಎಸ್ಸಿ., ಬಿ.ಬಿ.ಎಂ. ಮತ್ತು ಬಿ.ಸಿ.ಎ. ಮುಂತಾದ ಪ್ರಥಮ ಪದವಿ ಕೋರ್ಸು / ಕಾಂಬಿನೇಷನ್‌ಗಳಿಗೆ 15ಕ್ಕಿಂತ ಕಡಿಮೆ ವಿದ್ಯಾರ್ಥಿಗಳನ್ನು ಕಡ್ಡಾಯವಾಗಿ ಪ್ರವೇಶಾತಿ ಮಾಡಬಾರದೆಂದು ಹಾಗೂ ಒಂದು ವೇಳೆ 15 ಮತ್ತು ಅದಕ್ಕಿಂತ ಕಡಿಮೆ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಿದ್ದಲ್ಲಿ/ ನೀಡಿದ್ದಲ್ಲಿ ಅವರಿಗೆ ಪ್ರತ್ಯೇಕವಾಗಿ ಹೊಸ ಕೋರ್ಸು/ ಕಾಂಬಿನೇಷನ್/ವಿಭಾಗವನ್ನು ತೆರೆಯದೆ ಕಾಲೇಜಿನಲ್ಲಿ ಹಾಲಿ ಲಭ್ಯವಿರುವ ಕೋರ್ಸು/ ಕಾಂಬಿನೇಷನ್/ ವಿಭಾಗದಲ್ಲೇ ಪ್ರವೇಶಾತಿ ಮಾಡಿಕೊಳ್ಳುವುದು.

..3

12. ಅದೇ ರೀತಿ ಭಾಷೆಗಳಿಗೆ 05 ಕ್ಕಿಂತ ಕಡಿಮೆ ವಿದ್ಯಾರ್ಥಿಗಳೂ ಪ್ರವೇಶಾತಿ ಆದಲ್ಲಿ ಅವರುಗಳೂ ಆ ಭಾಷೆಯನ್ನು ಸ್ವಯಂ ಅಧ್ಯಯನ ಮಾಡಬೇಕೆಂದು ಪ್ರವೇಶಾತಿ ಸಂಧರ್ಭದಲ್ಲಿ ಆ ವಿದ್ಯಾರ್ಥಿ ಹಾಗೂ ಪೋಷಕರಿಗೆ ಸ್ಪಷ್ಟ ಸೂಚನೆ ನೀಡುವುದು.
13. ಸರ್ಕಾರದ ಆದೇಶ ಸಂಖ್ಯೆ ಇಡಿ 164.ಯು.ಎನ್.ಇ.2019 ದಿನಾಂಕ 04.07.2020ರನ್ವಯ ಐಚ್ಛಿಕ ಕನ್ನಡವನ್ನು ಒಳಗೊಂಡ ಕಾಂಬಿನೇಷನ್‌ಗೆ ವಿದ್ಯಾರ್ಥಿ ಪ್ರವೇಶಾತಿ ಮಿತಿಯನ್ನು ಕನಿಷ್ಟ 05 ಎಂದು ಪರಿಗಣಿಸುವುದು.
14. ಗೃಹ ವಿಜ್ಞಾನ ಮತ್ತು ಅದರ ಉಪವಿಭಾಗಗಳು, ಸಂಗೀತ, ಭೂವಿಜ್ಞಾನ, ಎಲೆಕ್ಟ್ರಾನಿಕ್ಸ್, ಸಂಖ್ಯಾಶಾಸ್ತ್ರ, ಮಹಿಳಾ ಅಧ್ಯಯನ, ಅಪರಾಧಶಾಸ್ತ್ರ, ಪತ್ರಿಕೋದ್ಯಮ ಈ 8 ವಿಷಯಗಳಲ್ಲಿ ಒಂದು ವಿಷಯ ಇವುಗಳನ್ನು ಒಳಗೊಂಡ ಕಾಂಬಿನೇಷನ್‌ಗೆ ವಿದ್ಯಾರ್ಥಿ ಪ್ರವೇಶಾತಿ ಮಿತಿಯನ್ನು ಕನಿಷ್ಟ 10 ಎಂದು ಪರಿಗಣಿಸುವುದು.
15. ಪದವಿ ಕೋರ್ಸುಗಳಲ್ಲಿ ಅಂತಿಮ ವರ್ಷದ 5 ಮತ್ತು 6 ನೇ ಸೆಮಿಸ್ಟರ್‌ಗಳಲ್ಲಿ Elective ಪತ್ರಿಕೆಗಳಲ್ಲಿ ಪ್ರತಿಯೊಂದಕ್ಕೂ ಕನಿಷ್ಟ 15 ವಿದ್ಯಾರ್ಥಿಗಳು ಇರತಕ್ಕದ್ದು. 15 ಕ್ಕಿಂತ ಕಡಿಮೆ ವಿದ್ಯಾರ್ಥಿಗಳನ್ನು ಸೇರಿಸಿಕೊಂಡು ಕಾರ್ಯಭಾರ ತೋರಿಸಿದ್ದಲ್ಲಿ ಸಂಬಂಧಿಸಿದ ವಿಭಾಗದ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ನೇರಹೊಣೆಗಾರರಾಗಿರುತ್ತಾರೆ.
16. ಉಪನ್ಯಾಸಕರಿಗೆ ನಿಯಮಾನುಸಾರ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ 4 ಗಂಟೆಗಳಿಗಿಂತ ಉಳಿಕೆ ಕಾರ್ಯಭಾರವನ್ನು ಲಭ್ಯವಿರುವ ಉಪನ್ಯಾಸಕರಿಂದಲೇ ನಿರ್ವಹಿಸಲು ಕ್ರಮಕೈಗೊಳ್ಳುವುದು. ಈ ಉಳಿಕೆ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ನೇಮಿಸತಕ್ಕದ್ದಲ್ಲ.
17. ಪ್ರವೇಶಾತಿ ಹೆಚ್ಚಳಕ್ಕೆ ಸಂಬಂಧಿಸಿದಂತೆ ಕೈಗೊಳ್ಳುವ ಪ್ರಚಾರ ಕಾರ್ಯಗಳಿಗೆ ತಗಲುವ ವೆಚ್ಚವನ್ನು ಅರೆ ಸರ್ಕಾರಿ ಖಾತೆಯಿಂದ ಕಾಲೇಜು ಅಭಿವೃದ್ಧಿ ಸಮಿತಿ(ಸಿ.ಡಿ.ಸಿ) ಖಾತೆಯಿಂದ ಅಥವಾ ಕಛೇರಿ ವೆಚ್ಚದಿಂದ ನಿಯಮಾನುಸಾರ ಭರಿಸಲು ಅನುಮತಿ ನೀಡಲಾಗಿದೆ.
18. ಈ ಮೇಲ್ಕಂಡ ಕ್ರಮಗಳನ್ನು ಅನುಸರಿಸುವುದರೊಂದಿಗೆ ಪ್ರವೇಶಾತಿ ಕಡಿಮೆಯಾಗದಂತೆ ಕಾಳಜಿ ವಹಿಸಿ ಪ್ರಸ್ತುತ ಸಾಲಿನಲ್ಲಿ ಪ್ರವೇಶಾತಿ ಹೆಚ್ಚಳಕ್ಕೆ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳುವುದು.

ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ:

**ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.**

ಪ್ರತಿಯನ್ನು :

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ- ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು- ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಮಾನ್ಯ ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಮತ್ತು ಜಂಟಿ ನಿರ್ದೇಶಕರ ಆಪ್ತ ಶಾಖೆ- ಮಾಹಿತಿಗಾಗಿ.
4. ಕಛೇರಿ ಪ್ರತಿ.